# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 184 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ನಗರಸಭೆಯ ಚುನಾವಣೆ ಜರುಗಿ ಸುಮಾರು ಎರಡು ವರ್ಷ ಕಳೆದರೂ ಇಲ್ಲಿಯವರೆಗೆ ಅಧ್ಯಕ್ಷ / ಉಪಾಧ್ಯಕ್ಷರ ಚುನಾವಣೆ ನಡೆಸದಿರುವುದಕ್ಕೆ ಕಾರಣವೇನು: | ಸರ್ಕಾರದ ಪತ್ರ ಸಂಖ್ಯೆ: ನಅಇ 229 ಎಂಎಲ್ಆರ್ 2022, ದಿನಾಂಕ:17.09.2022ರಲ್ಲಿ ದಿನಾಂಕ08.10.2020ರ ಅಧಿಸೂಚನೆಯನ್ವಯ ಬೀದರ್ ನಗರಸಭೆಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಸ್ಥಾನಗಳಿಗೆ ನಿಯಮಾನುಸಾರ ಚುನಾವಣೆ ನಡೆಸುವಂತೆ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| (ಆ) | ಚುನಾಯಿತರಾದ ನಗರಸಭೆ ಸದಸ್ಯರು ಅತಂತ್ರ ಸ್ಥಿತಿಯಲ್ಲಿದ್ದು ಸಾರ್ವಜನಿಕರಿಂದ ಮುಜುಗರಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 92 ಎಂಎಲ್ಆರ್ 2018, ದಿನಾಂಕ:12.03.2019ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ-1964ರ ಸೆಕ್ಷನ್–315ರನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ನಗರ ಸ್ಥಳೀಯ ಸಂಸ್ಥೆಗಳ ದೈನಂದಿನ ಕಾರ್ಯನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ. ಆದ್ದರಿಂದ, ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದಿಲ್ಲ. |
| (ಇ) | ಇದರಿಂದ ಬೀದರ್ ನಗರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದರ ಜೊತೆಗೆ ಅಧಿಕಾರಿಗಳು ಅಭಿವೃದ್ಧಿಗೆ ನಿರ್ಲಕ್ಷ್ಯತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ನಗರಸಭೆ ಸಮಿತಿ ರಚನೆ ಮಾಡಲಾಗುವುದು ಯಾವಾಗ: | |
| (ಈ) | ಸಮಿತಿ ರಚನೆ ಮಾಡದಿರುವುದಕ್ಕೆ ಕಾರಣಕರ್ತರಾದವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | |

ಸಂಖ್ಯೆ: ನಅಇ 01 ಎಲ್‌ಸಿಕ್ಯೂ 2023

(ಎನ್. ನಾಗರಾಜು ಎಂ ಟಿ ಬಿ)
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು